ಬೆಳಗಾವಿ ಜಿಲ್ಲೆಯಲ್ಲಿರುವ ನ್ಯಾಯಬೆಲೆ ಅಂಗಡಿ ಕುರಿತು

124 (1510) ಶ್ರೀ ಕಾಕಾಸಾಹೇಬ್ ಪಾಂಡುರಂಗ ಪಾಟೀಲ್ (ನಿಪ್ಪಾಣಿ) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು);

ಆ) ಅವುಗಳಲ್ಲಿ ಮುಚ್ಚಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು);

ಇ) ಚಾಲ್ತಿ ವರ್ಷದಲ್ಲಿ ಜನಸಂಖ್ಯೆ ಆಧಾರದ ಮೇಲೆ ಹೊಸದಾಗಿ ನ್ಯಾಯಬೆಲೆ ಅಂಗಡಿ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಈ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ಹಾಲಪ್ಪ (ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 1,687 ನ್ಯಾಯಬೆಲೆ ಅಂಗಡಿಗಳು ಇರುತ್ತವೆ. ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ :–

ಕ್ರ. ಸಂ.	ತಾಲ್ಲೂಕಿನ ಹೆಸರು	ನ್ಯಾಯಬೆಲೆ ಅಂಗಡಿಗಳ ಸಂಖ್ಯೆ
1	ಬೆಳಗಾವಿ (ಅಪ)	165
2	ಬೆಳಗಾವಿ (ಗ್ರಾ)	165
3	ಖಾನಾಪುರ	136
4	ಹುಕ್ಕೇರಿ	143
5	ಬೈಲಹೊಂಗಲ	143
6	ಸದತ್ತಿ	127
7	ರಾಮದುರ್ಗ	121
8	ಗೋಕಾಕ್	193

9	ಚಿಕ್ಕೋಡಿ	215
10	ಅಥಣಿ	140
11	ರಾಯಭಾಗ	139
	ಒಟ್ಟು	**1687**

ಆ) ಮೇಲಿನವುಗಳಲ್ಲಿ ಕರ್ನಾಟಕ ಅಗತ್ಯ ವಸ್ತುಗಳ (ಸಾವಿಪ) ನಿಯಂತ್ರಣಾ ಆದೇಶ 1992 ರ ನಿಯಮಗಳ ಉಲ್ಲಂಘನೆ ಮಾಡಿದ್ದರಿಂದ 18 ನ್ಯಾಯಬೆಲೆ ಅಂಗಡಿಗಳನ್ನು ರದ್ದುಪಡಿಸಲಾಗಿರುತ್ತದೆ. ತಾಲ್ಲೂಕುವಾರು ವಿವರ ಕೆಳಗಿನಂತಿದೆ:–

ಕ್ರ. ಸಂ.	ತಾಲ್ಲೂಕಿನ ಹೆಸರು	ರದ್ದುಪಡಿಸಿದ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ (ಮಾರ್ಚ್ 2009 ರಿಂದ ಫೆಬ್ರವರಿ 2010ರ ವರೆಗೆ)
1	ಬೆಳಗಾವಿ (ಅಪ)	1
2	ಬೆಳಗಾವಿ (ಗ್ರಾ)	0
3	ಖಾನಾಪುರ	1
4	ಹುಕ್ಕೇರಿ	1
5	ಬೈಲಹೊಂಗಲ	1
6	ಸದತ್ತಿ	3
7	ರಾಮದುರ್ಗ	1
8	ಗೋಕಾಕ್	0
9	ಚಿಕ್ಕೋಡಿ	9
10	ಅಥಣಿ	1
11	ರಾಯಭಾಗ	0
	ಒಟ್ಟು	**18**

ಇ) ಇಲ್ಲ.

ಆದರೆ, 1992ರ ಅವಶ್ಯಕ ವಸ್ತುಗಳ (ಸಾ.ವಿ.ಪ) ನಿಯಂತ್ರಣ ಆದೇಶ ರನ್ವಯ ಗ್ರಾಮಾಂತರ ಪ್ರದೇಶದಲ್ಲಿ ಕನಿಷ್ಟ 300 ಪಡಿತರ ಚೀಟಿಗಳು

ಹಾಗೂ ಪಟ್ಟಣ ಪ್ರದೇಶಗಳಲ್ಲಿ 500 ಪಡಿತರ ಚೀಟಿಗಳು ಲಭ್ಯವಿದ್ದಲ್ಲಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಬೆಂಗಳೂರು ಅನೌಪಚಾರಿಕ ಪಡಿತರ ಪ್ರದೇಶದಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಅಪರ ನಿರ್ದೇಶಕರು ನ್ಯಾಯಬೆಲೆ ಅಂಗಡಿಗಳಿಗೆ ನಿಯಮಾನುಸಾರ ಅಧಿಸೂಚನೆಯನ್ನು ಹೊರಡಿಸಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವರು.

ಈ) ಪ್ರಸ್ತುತ ರಾಜ್ಯದಲ್ಲಿ ಎಲ್ಲಾ ಕಾರ್ಡುದಾರರಿಗೆ ಗಣಕೀಕೃತ ಖಾಯಂ ಪಡಿತರ ಚೀಟಿ ವಿತರಣೆ ಕಾರ್ಯ ಪ್ರಗತಿಯಲ್ಲಿರುತ್ತದೆ. ಈ ಕಾರ್ಯ ಪೂರ್ಣಗೊಂಡ ನಂತರ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಜಿಲ್ಲೆಗಳಲ್ಲಿ ಅಧಿಸೂಚನೆ ಹೊರಡಿಸಿ ಹೊಸ ನ್ಯಾಯಬೆಲೆ ಅಂಗಡಿಗಳನ್ನು ನಿಯಮಾನುಸರ ಎಲ್ಲೆಲ್ಲಿ ಅವಶ್ಯವಿದೆಯೋ ಆ ಗ್ರಾಮಗಳಲ್ಲಿ ಮಂಜೂರು ಮಾಡಲು ಕ್ರಮ ಕೈಗೊಳ್ಳುವರು.

ಶ್ರೀ ಕಾಕಾಸಾಹೇಬ್ ಪಾಂಡುರಂಗ ಪಾಟೀಲ್ : ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಉತ್ತರ ಕೊಟ್ಟಿದ್ದಾರೆ. ಎಲ್ಲಾ ಹಳದಿ ಪಡಿತರ ಚೀಟಿಗಳ ವಿತರಣೆ ಮುಗಿದ ನಂತರ ಜಿಲ್ಲಾಧಿಕಾರಿಗಳ ಮುಖಾಂತರ ನೋಟೀಸ್ ಕೊಟ್ಟು ಅನಂತರ, ಪಡಿತರ ಚೀಟಿಗಳನ್ನು ವಿತರಿಸುವ ಕಾರ್ಯವನ್ನು ಕೆಲವು ನ್ಯಾಯಬೆಲೆ ಅಂಗಡಿಗಳಲ್ಲಿ ತಡೆ ಹಿಡಿದಿದ್ದಾರೆ. ಹವಾರು ವರ್ಷಗಳಿಂದ ಕೆಲವು ಊರುಗಳಲ್ಲಿ ಒಂದೊಂದೇ ನ್ಯಾಯ ಬೆಲೆ ಅಂಗಡಿ ಇದೆ. ಇದರಿಂದ ಜನರಿಗೆ ತೊಂದರೆಯಾಗುತ್ತಿದೆ. ಅಲ್ಲಿ ಸ್ಥಳೀಯರು, ಜನಪ್ರತಿನಿಧಿಗಳು ಜಿಲ್ಲಾಧಿಕಾರಿಗಳಿಗೆ ಹೇಳಿದಾಗ ಆ ಸೂಚನೆಯನ್ನು ಪರಿಗಣಿಸಿ ಪಡಿತರ ಚೀಟಿಗಳನ್ನು ವಿತರಿಸುವ ವ್ಯವಸ್ಥೆ ಮಾಡಬೇಕೆಂದು ತಮ್ಮ ಮೂಲಕ ಮಾನ್ಯ ಸಚಿವರಲ್ಲಿ ಕೇಳಿಕೊಳ್ಳುತ್ತೇನೆ.

ಶ್ರೀ ಹೆಚ್. ಹಾಲಪ್ಪ : ಕುರಿತು ಕ್ರಮ ಕೈಗೊಳ್ಳುತ್ತೇವೆ.

ಹುಬ್ಬಳ್ಳಿ ಕಿತ್ತೂರ ಚೆನ್ನಮ್ಮ ಸರ್ಕಲ್‌ನಿಂದ ಕಾರವಾರ ರೋಡ್ ಬೈಪಾಸ್‌ವರೆಗೆ ದ್ವಿಮುಖ ರಸ್ತೆ ನಿರ್ಮಾಣ

127 (978) ಶ್ರೀ ವೀರಭದ್ರಪ್ಪ ಹಾಲಹರವಿ (ಹುಬ್ಬಳ್ಳಿ-ಧಾರವಾಡ ಪೂರ್ವ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?